# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 2415 |
| ಸದಸ್ಯರ ಹೆಸರು | : | ಶ್ರೀ ಬಸನಗೌಡ ಬಾದರ್ಲಿ (ವಿಧಾನಸಭೆಯಿಂದ ಚುನಾಯಿತರಾದವರು) |
| ಉತ್ತರಿಸುವವರು | : | ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರು. |
| ಉತ್ತರಿಸಬೇಕಾದ ದಿನಾಂಕ | : | 27/03/2026 |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಸಿಂಧನೂರು ತಾಲ್ಲೂಕಿನ ರಾಮತ್ನಾಳ ಗ್ರಾಮದಲ್ಲಿ ಹೊಸ ಅಂಗನವಾಡಿ ಕೇಂದ್ರ ಮಂಜೂರಾತಿಗಾಗಿ ಸರ್ಕಾರದ ಮುಂದೆ ಪ್ರಸ್ತಾವನೆ ಇದೆಯೇ; ಇದ್ದಲ್ಲಿ, ಪ್ರಸ್ತುತ ಯಾವ ಹಂತದಲ್ಲಿದೆ; | ಹೌದು, ಸಿಂಧನೂರು ತಾಲ್ಲೂಕಿನ ರಾಮತ್ನಾಳ ಗ್ರಾಮದಲ್ಲಿ ಹೊಸ ಅಂಗನವಾಡಿ ಕೇಂದ್ರ ಮಂಜೂರಾತಿಗಾಗಿ ಸರ್ಕಾರದ ಮುಂದೆ ಪ್ರಸ್ತಾವನೆ ಬಂದಿರುತ್ತದೆ.<br><br>ಐಸಿಡಿಎಸ್ ಯೋಜನೆಯು ಕೇಂದ್ರ ಪುರಸ್ಕೃತ ಯೋಜನೆಯಾಗಿದ್ದು, ಹೊಸ ಅಂಗನವಾಡಿ ಕೇಂದ್ರಗಳ ಮಂಜೂರಾತಿಯು ಕೇಂದ್ರ ಸರ್ಕಾರದ ಪರಿಧಿಗೆ ಒಳಪಟ್ಟಿದ್ದು, ಕೇಂದ್ರ ಸರ್ಕಾರದ ಅನುಮೋದನೆ ದೊರೆತ ನಂತರ ಹೊಸ ಅಂಗನವಾಡಿ ಕೇಂದ್ರ ಮಂಜೂರು ಮಾಡಲಾಗುವುದು.<br><br>ಮುಂದುವರೆದು, ದಿನಾಂಕ:01.08.2025 ರಂದು ಕೇಂದ್ರ ಸರ್ಕಾರಕ್ಕೆ 387 ಹೊಸ ಅಂಗನವಾಡಿ ಕೇಂದ್ರಗಳ ಪ್ರಸ್ತಾವನೆಯನ್ನು ಸಲ್ಲಿಸಲಾಗಿದ್ದು, ಮಂಜೂರಾತಿ ನಿರೀಕ್ಷಿಸಲಾಗಿದೆ. |
| ಆ) | ಯಾವ ಕಾಲಮಿತಿಯೊಳಗೆ ಸದರಿ ಗ್ರಾಮದಲ್ಲಿ ನೂತನ ಅಂಗನವಾಡಿ ಕೇಂದ್ರವನ್ನು ಪ್ರಾರಂಭಿಸಲು ಸರ್ಕಾರದಿಂದ ಅನುದಾನ ಬಿಡುಗಡೆ ಮಾಡಲಾಗುವುದು? | ಕೇಂದ್ರ ಸರ್ಕಾರದಿಂದ ಅನುಮೋದನೆ ದೊರೆತ ನಂತರ ನಿಯಮಾನುಸಾರ ಹೊಸ ಅಂಗನವಾಡಿ ಕೇಂದ್ರಗಳನ್ನು ಮಂಜೂರು ಮಾಡಲಾಗುವುದು ಹಾಗೂ ಮಂಜೂರಾತಿ ದೊರೆತ ನಂತರ ಅನುದಾನ ಬಿಡುಗಡೆಗೆ ಕ್ರಮವಹಿಸಲಾಗುವುದು. |

**ಸಂಖ್ಯೆ: ಮಮಇ 113 ಐಸಿಡಿ 2026**

**(ಲಕ್ಷ್ಮೀ ಆರ್. ಹೆಬ್ಬಾಳಕರ್)**
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ
ವಿಕಲಚೇತನರ ಮತ್ತು ಹಿರಿಯ ನಾಗರಿಕರ
ಸಬಲೀಕರಣ ಸಚಿವರು.